ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಮಾನ್ಯ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ

ದಿನಾಂಕ : DATE : 03/07/2019

# ಆನಂದ ವಿಚಾರಣೆ ನಡೆಸಿ ಮುಂದಿನ ಕ್ರಮ

ಬೆಂಗಳೂರು: 'ವಿಜಯನಗರ ಶಾಸಕ ಆನಂದಸಿಂಗ್ ರಾಜೀನಾಮೆ ಮಾತ್ರ ತಲುಪಿದ್ದು ಸಾರ್ವಜನಿಕ ವಿಚಾರಣೆ ಮೂಲಕ ಅಂಗೀಕಾರದ ಬಗ್ಗೆ ತೀರ್ಮಾನಿಸಲಾಗುವುದು' ಎಂದು ವಿಧಾನಸಭಾಧ್ಯಕ್ಷ ರಮೇಶ್ ಕುಮಾರ್ ಹೇಳಿದ್ದಾರೆ. ಈ ಮೂಲಕ ತಕ್ಷಣಕ್ಕೆ ರಾಜೀನಾಮೆ ಅಂಗೀಕಾರ ಆಗುವುದು ಅನುಮಾನ.

ಇದೇ ವೇಳೆ, ರಮೇಶ್ ಜಾರಕಿಹೊಳಿ ರಾಜೀನಾಮೆ ಬಗ್ಗೆಯೂ ಗರಂ ಆದ ಅವರು, 'ಕೆಲವರು ಫ್ಯಾಕ್ಸ್ ಮೂಲಕ ರಾಜೀನಾಮೆ ರವಾನಿಸಿದ್ದಾರೆ. ನಾನು ಪೋಸ್ಟಲ್ ಡಿಪಾರ್ಟ್‌ಮೆಂಟ್‌ನಲ್ಲಿ ಇಲ್ಲ' ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಆನಂದ್ ಸಿಂಗ್ ರಾಜೀನಾಮೆ ಅಂಗೀಕರಿಸುವ ಕುರಿತು ಮಂಗಳವಾರ ಸುಮಾರು 2 ಗಂಟೆ ವಿಧಾನಸಭೆ ಅಧಿಕಾರಿಗಳ ಜತೆ ಚರ್ಚೆ ನಡೆಸಿದರು. ಆ ನಂತರ ಮಾಧ್ಯಮಗಳೊಂದಿಗೆ ಮಾತನಾಡಿ, 'ಆನಂದ್‌ಸಿಂಗ್ ರಾಜೀನಾಮೆ ಪತ್ರ ತಲುಪಿದೆ. ಸೋಮವಾರ ಬೆಳಗ್ಗೆ 6.30ಕ್ಕೆ ದೊಮ್ಮಲೂರಿನಲ್ಲಿರುವ ನನ್ನ ಮನೆಗೆ ಬಂದು ರಾಜೀನಾಮೆ ಸಲ್ಲಿಸಿದ್ದಾರೆ. ನಿಯಮಗಳ ಪ್ರಕಾರ ಕ್ರಮ ಕೈಗೊಳ್ಳುವುದಾಗಿ ಹೇಳಿದ್ದೇನೆ. ಬೇರೆ ಯಾವ ಶಾಸಕರೂ ರಾಜೀನಾಮೆ ನೀಡಿಲ್ಲ' ಎಂದು ಹೇಳಿದರು.

ಚಿಂಚೋಳಿ ಶಾಸಕರಾಗಿದ್ದ ಉಮೇಶ್ ಜಾಧವ್ ರಾಜೀನಾಮೆ ಅಂಗೀಕರಿಸಿದ ರೀತಿಯಲ್ಲಿಯೇ,

ಉದಯ 3/7/19

## ನಾನು ಪೋಸ್ಟಲ್ ಡಿಪಾರ್ಟ್‌ಮೆಂಟ್‌ನಲ್ಲಿಲ್ಲ



ಇದೇ ವೇಳೆ, ಸ್ಪೀಕರ್ ರಮೇಶ್‌ಕುಮಾರ್ ಅವರು, ಗೋಕಾಕ್ ಶಾಸಕ ರಮೇಶ್ ಜಾರಕಿಹೊಳಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. 'ಫ್ಯಾಕ್ಸ್ ಮೂಲಕ ರಾಜಿನಾಮೆ ನೀಡಲು ನಾನು ಪೋಸ್ಟಲ್ ಡಿಪಾರ್ಟ್‌ಮೆಂಟ್‌ನಲ್ಲಿಲ್ಲ. ಮಾಧ್ಯಮಗಳಲ್ಲಿ ಮಾತನಾಡುವ ಮುನ್ನ ಎಚ್ಚರಿಕೆಯಿಂದ ಮಾತನಾಡಲಿ. ಆ ದಿನಗಳ ರೀತಿಯಲ್ಲಿ ನಾನು ವರ್ತನೆ ಮಾಡಲು ಆಗುವುದಿಲ್ಲ. ಸಂವಿಧಾನದ ನೀತಿ ನಿಯಮಗಳನ್ನು ಮೊದಲು ತಿಳಿದುಕೊಳ್ಳಲಿ' ಎಂದು ಏರು ಧ್ವನಿಯಲ್ಲಿ ಆಕ್ರೋಶ ಹೊರ ಹಾಕಿದರು.

ಆ ಶಾಸಕ ಮಾಧ್ಯಮಗಳ ಮುಂದೆ ಮಾತನಾಡುವಾಗ ಮಾತಿನ ಮೇಲೆ ಹಿಡಿತ ಇರಲಿ ಎಂದ ಅವರು, ಮೈಂಡ್ ಯುವರ್ ಲಾಂಗ್ವೇಜ್ ಎಂದು ರಮೇಶ್ ಜಾರಕಿಹೊಳಿಗೆ ಪರೋಕ್ಷವಾಗಿ ಎಚ್ಚರಿಕೆ ನೀಡಿದರು. ಸ್ಪೀಕರ್ ಸ್ಥಾನ ಪವಿತ್ರವಾದದ್ದು, ಆ ಸ್ಥಾನದಲ್ಲಿ ಕುಳಿತಿರುವ ನಾನು ಬಹಳ ಚಿಕ್ಕ ವ್ಯಕ್ತಿ ಎಂದೂ ಹೇಳಿದರು.

ಆನಂದ್ ಸಿಂಗ್ ರಾಜೀನಾಮೆಗೆ ಕಾರಣವೇನು? ಯಾವುದಾದರೂ ಒತ್ತಡಕ್ಕೆ ಮಣಿದಿದ್ದಾರಾ ಎನ್ನುವ ಬಗ್ಗೆ ಸಾರ್ವಜನಿಕವಾಗಿ ಅವರನ್ನು ವಿಚಾರಣೆ ಮಾಡಿ, ಮುಂದಿನ ತೀರ್ಮಾನ ಕೈಗೊಳ್ಳುತ್ತೇನೆ. ಸಂವಿಧಾನದ ಅಡಿಯಲ್ಲಿ ಯಾವುದೇ ಪಕ್ಷಪಾತವಿಲ್ಲದೇ ಕ್ರಮ ಕೈಗೊಳ್ಳುತ್ತೇನೆ. ಇಷ್ಟೇ ದಿನದಲ್ಲಿ ರಾಜೀನಾಮೆ ಬಗ್ಗೆ ತೀರ್ಮಾನ ತೆಗೆದುಕೊಳ್ಳಬೇಕೆಂದು ನಿಯಮವೇನಿಲ್ಲ. ಕಾನೂನು ಬದ್ಧವಾಗಿ ಶೀಘ್ರ ತೀರ್ಮಾನ ತೆಗೆದುಕೊಳ್ಳುವುದಾಗಿ ತಿಳಿಸಿದರು. ಇನ್ನು ಬೇರೆ ಶಾಸಕರು ರಾಜೀನಾಮೆ ನೀಡುವುದಕ್ಕೆ ಸಮಯ ಕೇಳಿದ್ದಾರಾ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿ, ಯಾವ ಶಾಸಕರೂ ಸಮಯ ಕೇಳಿಲ್ಲ. ರಾಜೀನಾಮೆ ನೀಡಲು ಯಾರಾದರೂ ನನ್ನ ಭೇಟಿಗೆ ಅವಕಾಶ ಕೇಳಿದರೆ, ಅವರಿಗೆ ನನ್ನ ನಂಬರ್ ಕೊಡಿ ಎಂದು ಹಾಸ್ಯ ಚಟಾಕಿ ಹಾರಿಸಿದರು.